ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಸಭೆ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ ದಿನಾಂಕ : DATE : 21/01/2020

# ಕೋರ್ಟಲ್ಲಿ ಆನಂದ್ ಸಿಂಗ್, ಗಣೇಶ್ ಇಂದು ರಾಜಿ?

ಕ.ಪ್ರ. 21/1/20

ಬೆಂಗಳೂರು: ಬಿಡದಿಯ ಈಗಲ್‌ಟನ್ ರೆಸಾರ್ಟ್‌ನಲ್ಲಿ ಶಾಸಕ ಆನಂದ್ ಸಿಂಗ್ ಮೇಲೆ ಶಾಸಕ ಕಂಪ್ಲಿ ಗಣೇಶ್ ನಡೆಸಿದ್ದಾರೆ ಎನ್ನಲಾದ ಹಲ್ಲೆಯ ಪ್ರಕರಣವನ್ನು ಪರಸ್ಪರ ರಾಜಿ-ಸಂಧಾನದ ಮೂಲಕ ಬಗೆಹರಿಸಿಕೊಳ್ಳಲಾಗುವುದು ಗಣೇಶ್ ಪರ ವಕೀಲರು ಹೈಕೋರ್ಟ್‌ಗೆ ತಿಳಿಸಿದ್ದಾರೆ. ಆನಂದ್ ಸಿಂಗ್ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿದ ಆರೋಪಕ್ಕೆ ಸಂಬಂಧಿಸಿದಂತೆ ತಮ್ಮ ವಿರುದ್ಧ ದಾಖಲಾಗಿರುವ ಎಫ್‌ಐಆರ್ ರದ್ದು ಕೋರಿ ಕಂಪ್ಲಿ ಶಾಸಕ ಗಣೇಶ್ ಸಲ್ಲಿಸಿದ ಅರ್ಜಿ ಹೈಕೋರ್ಟ್‌ನಲ್ಲಿ ಸೋಮವಾರ ವಿಚಾರಣೆಗೆ ಬಂದಿತ್ತು. ಈ ವೇಳೆ, ಶಾಸಕ ಗಣೇಶ್ ಪರ ವಕೀಲ ಶ್ಯಾಮ್ ಸುಂದರ್ ನ್ಯಾಯಪೀಠದ ಮುಂದೆ ಹಾಜರಾಗಿ, ಈ ಪ್ರಕರಣ ಬಹುತೇಕ ಮುಕ್ತಾಯಗೊಂಡಿದೆ. ಉಭಯ ಕಕ್ಷಿದಾರರು ರಾಜಿ-ಸಂಧಾನದ ಮೂಲಕ ಪ್ರಕರಣವನ್ನು ಇತ್ಯರ್ಥಪಡಿಸಿಕೊಳ್ಳಲಿದ್ದಾರೆ. ಅದಕ್ಕೆ ಅವಕಾಶ ಮಾಡಿಕೊಡಬೇಕು ಎಂದು ಮೆಮೋ ಸಲ್ಲಿಸಿದರು. ಅದಕ್ಕೆ ಪ್ರತಿಕ್ರಿಯಿಸಿದ ನ್ಯಾಯಪೀಠ, ಹಾಗಿದ್ದರೆ ಉಭಯ ಕಕ್ಷಿದಾರರು ಮಂಗಳವಾರ (ಜ.21) ನ್ಯಾಯಾಲಯದ ಮುಂದೆ ಹಾಜರಾಗಲಿ. ಬಳಿಕ ಮೆಮೋ ಪರಿಗಣಿಸಲಾಗುವುದು ಎಂದು ಹೇಳಿತು. ಅರ್ಜಿಯು ಮಂಗಳವಾರ ನ್ಯಾ.ಬಿ.ಎ. ಪಾಟೀಲ್ ಅವರ ನ್ಯಾಯಪೀಠದ ಮುಂದೆ ವಿಚಾರಣೆಗೆ ನಿಗದಿಯಾಗಿದೆ.